ದಿನಾಂಕಃ 10-03-2026 ರಂದು ಸಾಕ್ಷಿಯನ್ನು ಕರೆಸಿ ಸತ್ಯ ಪ್ರತಿಜ್ಞೆ ಬೋಧಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಃ **1** ರಿಂದ **5** ನೇ ಪ್ರತಿವಾದಿಯರ ಪರ ಎ.ಜಿ.ಪಿ. ರವರಿಂದ:

ನಾನು ದಾಖಲೆಗಳನ್ನು ಈ ಕೆಳಗಿನಂತೆ ಸಲ್ಲಿಸಿರುತ್ತೇನೆ.

1) ಶಾಲಾ ದಾಖಲಾತಿ ರಜಿಸ್ಟರನ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಡಿ-1 ಎಂದು ಗುರುತಿಸಲಾಯಿತು.

2) ವಾದಿ ನಮ್ಮ ಶಾಲೆಗೆ ದಾಖಲಾಗುವ ಪೂರ್ವದಲ್ಲಿ ಸಲ್ಲಿಸಿದ ಪ್ರವೇಶ ಅರ್ಜಿಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಡಿ-2 ಎಂದು ಗುರುತಿಸಲಾಯಿತು.

ನನ್ನ ಪ್ರತಿವಾದ ಪತ್ರದಲ್ಲಿ ಕೇಳಿದಂತೆ ಆದೇಶ ಮಾಡಲು ಪ್ರಾರ್ಥಿಸಿಕೊಳ್ಳುತ್ತೇನೆ.

ಪಾಟೀ ಸವಾಲುಃ ವಾದಿ ಪರ ಶ್ರೀ ಎಪ್.ಡಿ.ಎನ್. ವಕೀಲರಿಂದ:

**(**ಈ ಹಂತದಲ್ಲಿ ವಾದಿ ಹಾಗು ಅವರ ಪರ ವಕೀಲರನ್ನು ಕೂಗಿ ಕರೆಯಿಸಲಾಗಿ ಗೈರ ಹಾಜರು ಇದ್ದಕಾರಣ ಅವರ ಪರ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು**.)**

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯ ಪ್ರಕಾರ ಬೆರಳಚ್ಚು ಮಾಡಲಾಯಿತು.)

ಓ ಹೇ ಕೆ ಸರಿ ಇದೆ.

ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು
ಜೆಎಂಎಫ್‌ಸಿ ಹುನಗುಂದ